ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ: ಸಿಎಂಐ/ಪ.ಪೋ.ಲ/ಜ-2021/2020-2021 ದಿನಾಂಕ: 29-01-2021

****** ಸುತ್ತೋಲೆ *******

ವಿಷಯ: ಜನವರಿ-2021 ರ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಸಹಕಾರ ನೀಡುವ ಬಗ್ಗೆ

ಉಲ್ಲೇಖ 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು ರವರ ಅರೆ ಸರ್ಕಾರಿ ಪತ್ರ ಸಂಖ್ಯೆ: ಅಕುಕ 450 ಅಮುಕಾ 2020 ದಿನಾಂಕ: 30-12-2021

2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರವರ ಕಛೇರಿ ಪತ್ರ ಸಂಖ್ಯೆ: ಎನ್‌ಹೆಚ್‌ಎಂ/ಡಿಡಿ/ಐಎಂಎಂ/74/2019-20 ದಿನಾಂಕ: 25-01-2021

ಉಲ್ಲೇಖ(2)ರ ಪತ್ರದಲ್ಲಿ ಸೂಚಿಸಿರುವಂತೆ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) ಕಾರ್ಯಕ್ರಮವನ್ನು ದಿನಾಂಕ: 31-01-2021 ರಂದು ನಡೆಸಲು ಭಾರತ ಸರ್ಕಾರದ ಪತ್ರ ಸಂಖ್ಯೆ: 2037795/2021/**Immunization dated 14/01/2021** ಯಲ್ಲಿ ಆದೇಶಿಸಿರುವ ಹಿನ್ನಲೆಯಲ್ಲಿ ದಿನಾಂಕ: 31-01-2021 ರಂದು ಎಲ್ಲಾ ಜಿಲ್ಲೆಗಳಲ್ಲಿ ರಾಷ್ಟ್ರೀಯ ಲಸಿಕಾ ದಿನ (ಪಲ್ಸ್ ಪೋಲಿಯೋ) ಕಾರ್ಯಕ್ರಮವನ್ನು ಕೋವಿಡ್-19 ಮುಂಜಾಗ್ರತಾ ಕ್ರಮಗಳಾದ ಮುಖಗವಸು, ಹ್ಯಾಂಡ್‌ಸ್ಯಾನಿಟೈಸರ್, ಹ್ಯಾಂಡ್‌ವಾಶ್, ಸಾಮಾಜಿಕ ಅಂತರ ಕಾಯ್ದುಕೊಳ್ಳುವುದು ಇಂತಹ ಮುಂಜಾಗ್ರತಾ ಕ್ರಮವನ್ನು ತಪ್ಪದೇ ಪಾಲಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸೂಚಿಸಿದೆ ಹಾಗೂ ಉಲ್ಲೇಖ(1) ರ ಪತ್ರದನ್ವಯ ಈ ಕೆಳಕಂಡಂತೆ ಕ್ರಮವಹಿಸಲು ತಿಳಿಸಿದೆ.

- ಎಲ್ಲಾ ಶಾಲೆಗಳು (ಸರ್ಕಾರಿ, ಅನುದಾನಿತ ಮತ್ತು ಖಾಸಗಿ) ಪಲ್ಸ್ ಪೋಲಿಯೋ ಕಾರ್ಯಕ್ರಮದ ಬಗ್ಗೆ ಪೋಷಕರಿಗೆ ಮಾಹಿತಿ ನೀಡುವುದು ಹಾಗೂ ಸಹಕರಿಸುವುದು.
- ದಿನಾಂಕ: 31-01-2021 ರ ಭಾನುವಾರದಂದು ಆರೋಗ್ಯ ಇಲಾಖೆ ನಿಗಧಿಪಡಿಸಿರುವ ಸಮಯಕ್ಕೆ ಲಸಿಕಾ ಕಾರ್ಯಕ್ರಮವನ್ನು ಕೈಗೊಳ್ಳಲು ಶಾಲಾ ಕೊಠಡಿಗಳನ್ನು ತೆರೆದಿರುವುದು ಮತ್ತು ಪೋಲಿಯೋ ಲಸಿಕೆ ನೀಡಿಕೆಗಾಗಿ ಸಜ್ಜುಗೊಳಿಸುವುದು.
- ಪ್ರೌಢಶಾಲೆಗಳಲ್ಲಿ ಎನ್.ಎಸ್.ಎಸ್. ಹಾಗೂ ಎನ್.ಸಿ.ಸಿ ವಿದ್ಯಾರ್ಥಿಗಳನ್ನು ಕಾರ್ಯಕ್ರಮದ ಅನುಷ್ಟಾನಕ್ಕಾಗಿ ನಿಯೋಜಿಸುವುದು.

ನಿರ್ದೇಶಕರು( ಪ್ರೌಢ ಶಿಕ್ಷಣ)

**ಇವರಿಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆ ರವರುಗಳ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳ, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ (ಸಂಬಂಧಿಸಿದ ಉಪನಿರ್ದೇಶಕರುಗಳ ಮುಖಾಂತರ)

**ಪ್ರತಿಯನ್ನು:**

1. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರ ಮಾಹಿತಿಗಾಗಿ
2. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಕೊಠಡಿ ಸಂಖ್ಯೆ: 105, ಮೊದಲನೇ ಮಹಡಿ, ವಿಕಾಸಸೌಧ, ಡಾ:ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು 560001 ರವರಿಗೆ ಮಾಹಿತಿಗಾಗಿ
3. ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಣೆಗಾಗಿ ಇ-ಆಡಳಿತ ಶಾಖೆಗೆ
4. ಕಛೇರಿ ಪ್ರತಿ